ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ (ಪಶ್ಚಿಮ ಪದವೀಧರ ಕ್ಷೇತ್ರ) ಇವರ ಶೂನ್ಯ ವೇಳೆಯ ಪ್ರಸ್ತಾಪಕ್ಕೆ ಉತ್ತರಿಸುವ ಬಗ್ಗೆ.

ವಿಷಯ

ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಕಳೆದ 2 ದಿನಗಳಿಂದ 6ರಿಂದ 8 ನೇ ತರಗತಿ ಬೋಧನೆಗೆ ಆಯ್ಕೆ ಆಗಿರುವ 13,352 ಅಭ್ಯರ್ಥಿಗಳ ನೇಮಕಾತಿ ಆದೇಶ ಹಾಗೂ ಸ್ಥಳ ನಿಯುಕ್ತಿ ಆದೇಶ ನೀಡಬೇಕೆಂದು ಪ್ರತಿಭಟನೆ ನಡೆಸಿರುವರು.

ಕಳೆದ ನವೆಂಬರ್ ತಿಂಗಳಿನಲ್ಲಿಯೆ ಆಯ್ಕೆಪಟ್ಟಿ ಪ್ರಕಟಿಸಿದ್ದರೂ ಈವರೆಗೆ ಆದೇಶ ಪ್ರತಿ ನೀಡದಿರುವುದರಿಂದ ಸಾವಿರಾರು ಅಭ್ಯರ್ಥಿಗಳು ತಮ್ಮ ಜೀವನೋಪಾಯಕ್ಕಾಗಿ ತೊಂದರೆ ಪಡುವಂತಾಗಿದೆ ಎಂದು ಪ್ರತಿಭಟನಾ ನೌಕರರು ಆರೋಪಿಸಿರುವರು. ಆದರೆ ಇಲಾಖಾ ಅಧಿಕಾರಿಗಳು ನ್ಯಾಯಾಲಯದಲ್ಲಿ ವಿಷಯ ಇದ್ದು, ಜೊತೆಗೆ ಸದ್ಯ ಕಾರ್ಯ ನಿರತ ಶಿಕ್ಷಕರ ವರ್ಗಾವಣೆ ಹಾಗೂ ಮುಂಬಡ್ತಿ ಪ್ರಕ್ರಿಯೆ ಪೂರ್ಣಗೊಳಿಸಿ ಹೊಸದಾಗಿ ಆಯ್ಕೆಯಾಗಿರುವ ಶಿಕ್ಷಕರಿಗೆ ಆದೇಶ ಪ್ರತಿ ನೀಡಲಾಗುವುದು ಎಂದು ಹೇಳುತ್ತಿರುವರು. ಇದಕ್ಕೆ ಸಂಬಂಧಿಸಿದಂತೆ ನೇಮಕವಾದ ಅಭ್ಯರ್ಥಿಗಳು ಪ್ರಸಕ್ತ ನೇಮಕಾತಿಗೂ ವರ್ಗಾವಣೆ ಹಾಗೂ ಮುಂಬಡ್ತಿಗೆ ಯಾವುದೇ ಸಂಬಂಧ ಇಲ್ಲವೆಂದು ಪ್ರತಿಪಾದಿಸುತ್ತಿರುವರು. ಈ ಹಿನ್ನೆಲೆಯಲ್ಲಿ, ಸಮಸ್ಯೆ ಸೃಷ್ಟಿಯಾಗಿದ್ದು, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಚಿವರು ಸಮಸ್ಯೆಗೆ ಪರಿಹಾರವನ್ನು ಕಂಡುಹಿಡಿಯಲು ನಾನು ಸದನದ ಮೂಲಕ ಒತ್ತಾಯಿಸುತ್ತೇನೆ.

ಸದ್ಯ ಸೃಷ್ಟಿಯಾಗಿರುವ ಸಮಸ್ಯೆಗೆ ಪರಿಹಾರ ಕಂಡುಹಿಡಿಯಲು ವಿಳಂಬವಾದಲ್ಲಿ, ಸಧ್ಯದಲ್ಲಿಯೇ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನೀತಿ ಸಂಹಿತೆ ಎದುರಾಗುವುದರಿಂದ ಆಯ್ಕೆ ಪಟ್ಟಿ ಪ್ರಕಟಗೊಂಡ ಒಂದು ವರ್ಷಕ್ಕೆ ಹೆಚ್ಚು ಕಾಲ ಅಭ್ಯರ್ಥಿಗಳನ್ನು ನಿರುದ್ಯೋಗಿಗಳಾಗಿ ಉಳಿಯಬೇಕಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸುತ್ತಿರುವರು. ಆದ್ದರಿಂದ, ಸಚಿವರು ತಕ್ಷಣ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಹಾಗೂ ಇನ್ನೂ ಉಳಿದ ಉನ್ನತ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಲು ಸೂಕ್ತ ಕ್ರಮವಹಿಸಬೇಕೆಂದು ಮತ್ತೊಮ್ಮೆ ಒತ್ತಾಯಿಸುತ್ತೇನೆ.

ಉತ್ತರ

ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 15,000 ಪದವೀಧರ ಪ್ರಾಥಮಿಕ ಶಿಕ್ಷಕರನ್ನು (6 ರಿಂದ 8ನೇ ತರಗತಿ) ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿಗಾಗಿ ದಿನಾಂಕ:21-03-2022 ರಂದು ಅಧಿಸೂಚನೆಯನ್ನು ಹೊರಡಿಸಿ, ನೇಮಕಾತಿ ಸಂಬಂಧ ಅಗತ್ಯ ಪ್ರಕ್ರಿಯೆಗಳ ನಂತರ 1:1 ಮುಖ್ಯ ಆಯ್ಕೆಪಟ್ಟಿಯನ್ನು ದಿನಾಂಕ:08-03-2023 ರಂದು ಪ್ರಕಟಿಸಲಾಗಿದ್ದು, ಒಟ್ಟು 13,352 ಅಭ್ಯರ್ಥಿಗಳು ಆಯ್ಕೆಯಾಗಿರುತ್ತಾರೆ.

ನೇಮಕಾತಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಕೆಲವು ವಿವಾಹಿತ ಮಹಿಳೆಯರು ತಂದೆಯ ಆದಾಯ ಪ್ರಮಾಣಪತ್ರ ಸಲ್ಲಿಸಿದ್ದರು, ಅಂತಹ ಪ್ರಕರಣಗಳನ್ನು ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 28 ಎಸ್ ಬಿಸಿ 86 ಬೆಂಗಳೂರು, ದಿನಾಂಕ 12ನೇ ಡಿಸೆಂಬರ್ 1986 ರನ್ವಯ ಪರಿಶೀಲಿಸಿ, ಅಂತಹ ಅಭ್ಯರ್ಥಿಗಳನ್ನು GMಗೆ ಪರಿಗಣಿಸಿ, ಅದರಂತೆ ದಿನಾಂಕ:18-11-2022 ರಂದು ಪ್ರಕಟಿಸಲಾಗಿದ್ದ 1:1

ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಯ್ಕೆಯಾಗದ ಕೆಲವು ವಿವಾಹಿತ ಮಹಿಳೆಯರು ಮಾನ್ಯ ಉಚ್ಚನ್ಯಾಯಾಲಯದಲ್ಲಿ WA. No:23752/2022 ರಲ್ಲಿ ಪ್ರಕರಣ ದಾಖಲಿಸಿದ್ದರು. ಸದರಿ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:30-01-2023 ರಂದು ತೀರ್ಪು ನೀಡಿ, ದಿನಾಂಕ:18-11-2022 ರಂದು ಪ್ರಕಟಿಸಲಾಗಿದ್ದ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ರದ್ದುಗೊಳಿಸಿತ್ತು.

ಗೌರವಾನ್ವಿತ ನ್ಯಾಯಾಲಯದ ತೀರ್ಪನ್ನು ಅನುಷ್ಠಾನಗೊಳಿಸುವ ಸಂಬಂಧ ಮಾನ್ಯ ನ್ಯಾಯಾಲಯದ ಮೊರೆ ಹೋಗಿರುವ ಅಭ್ಯರ್ಥಿಗಳನ್ನೊಳಗೊಂಡಂತೆ ಒಟ್ಟಾರೆಯಾಗಿ ತಂದೆಯ ಅಥವಾ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳನ್ನು ಹಾಗೂ ಈಗಾಗಲೇ ಮೆರಿಟ್ ಪಟ್ಟಿಯಲ್ಲಿರುವ ಗಂಡನ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಿರುವ ಅಭ್ಯರ್ಥಿಗಳನ್ನು ಒಟ್ಟಾರೆಯಾಗಿ ಮೆರಿಟ್ ಆಧಾರದ ಮೇಲೆ ಪರಿಗಣಿಸಿ, ಹೊಸದಾಗಿ 1:1 ಪರಿಷ್ಕೃತ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ, ದಿನಾಂಕ:27-02-2023 ರಂದು 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಮತ್ತು ದಿನಾಂಕ:08/03/2023 ರಂದು 1:1 ಮುಖ್ಯ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಯಿತು.

ಮಾನ್ಯ ನ್ಯಾಯಾಲಯದ ತೀರ್ಪಿನಂತೆ ಹಾಗೂ ಸರ್ಕಾರದ ನಡವಳಿಯ ದಿನಾಂಕ:07-02-2023 ರಂತೆ ಕ್ರಮವಹಿಸಿ, ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ, ದಿನಾಂಕ:08-03-2023 ರಂದು ಪ್ರಕಟಿಸಿದ (ದಿನಾಂಕ:18-11-2023 ರಂದು ಪ್ರಕಟಿಸಲಾಗಿದ್ದು, ನ್ಯಾಯಾಲಯದ ತೀರ್ಪಿನಂತೆ ರದ್ದಾದ ಪಟ್ಟಿಯಲ್ಲಿದ್ದ) ಪಟ್ಟಿಯಲ್ಲಿ ಆಯ್ಕೆಯಾಗದ ಕೆಲವು ಅಭ್ಯರ್ಥಿಗಳು ಮಾನ್ಯ ಉಚ್ಚನ್ಯಾಯಾಲಯದಲ್ಲಿ WA.No: 305/2023 ಮತ್ತು ಇತರರು ಮೇಲ್ಮನವಿ ಪ್ರಕರಣ ದಾಖಲಿಸಿರುತ್ತಾರೆ.

ಸದರಿ ಪ್ರಕರಣಗಳು ಗೌರವಾನ್ವಿತ ಮುಖ್ಯನ್ಯಾಯಮೂರ್ತಿಗಳ ಪೀಠದಲ್ಲಿ ವಿಚಾರಣೆಯ ಹಂತದಲ್ಲಿದ್ದು, ಪ್ರಕರಣದಲ್ಲಿ ದಿನಾಂಕ:02-05-2023 ರಂದು ನೀಡಿರುವ ಮಧ್ಯಂತರ ತೀರ್ಪಿನಲ್ಲಿ "The Selection process Shall go on without announcing the result till the next date of hearing" ಎಂದು ಆದೇಶಿಸಲಾಗಿದೆ. ಪ್ರಕರಣದ ಮುಂದಿನ ವಿಚಾರಣೆಯು ದಿನಾಂಕ:07-08-2023ಕ್ಕೆ ನಿಗದಿಯಾಗಿರುತ್ತದೆ. 1:1 ಮುಖ್ಯ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಸಂಬಂಧ ಪೂರ್ವಬಾವಿಯಾಗಿ ಮೂಲದಾಖಲೆಗಳ ನೈಜತೆ ಪರಿಶೀಲನಾ ಕಾರ್ಯವನ್ನು ನಡೆಸಲಾಗುತ್ತಿದ್ದು, ಪ್ರಕ್ರಿಯೆಯು ಪ್ರಗತಿಯಲ್ಲಿದೆ.

ಕಲ್ಯಾಣ ಕರ್ನಾಟಕ ವಿಭಾಗಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 03 ಹೈಕಕೋ 2019, ದಿ::01.02.2023ರಲ್ಲಿ ಅರ್ಜಿ ಸಲ್ಲಿಸುವ ಸಮಯದಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಸ್ಥಳೀಯ ಅಭ್ಯರ್ಥಿಗಳಿಂದ ಪಡೆಯಲಾಗಿರುವ ಆಯ್ಕೆಯನ್ನು ಪರಿಗಣಿಸದೇ, ಮೆರಿಟ್ ಪಟ್ಟಿಯಿಂದ ಆಯ್ಕೆಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ, ಆಯ್ಕೆಪಟ್ಟಿ ತಯಾರಿಸುವಂತೆ ಆದೇಶವಿದ್ದ ಕಾರಣ ಅದರಂತೆ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ, ಪ್ರಕಟಿಸಿದ್ದರಿಂದ ಮಾನ್ಯ ಕೆ.ಎ.ಟಿ ಕಲ್ಬುರ್ಗಿ ಪೀಠ ಇಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ:20213-20214/2023 ಮತ್ತು 20167-20168/2023ರಲ್ಲಿ ಪ್ರಕರಣದಲ್ಲಿ ದಿನಾಂಕ:15-06-2023ರಂದು ನೀಡಿರುವ ಮಧ್ಯಂತರ ತೀರ್ಪಿನಲ್ಲಿ "The Selection process Shall go on without announcing the result till the next date of hearing" ಎಂದು ಆದೇಶಿಸಲಾಗಿದೆ. ಅಂತೆಯೇ ಮಾನ್ಯ ಕೆ.ಎ.ಟಿ ನ್ಯಾಯಾಲಯ ಬೆಂಗಳೂರು ಇಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ : 2409-13 ಮತ್ತು 2417-2419/2023 ರಲ್ಲಿ ಮತ್ತು ಮಾನ್ಯ ಕೆ.ಎ.ಟಿ ಬೆಳಗಾವಿ ಪೀಠ ಇಲ್ಲಿ

ಅರ್ಜಿ ಸಂಖ್ಯೆ: 10445/2023 ಮತ್ತು 10485/2023ರಲ್ಲಿ ಅಭ್ಯರ್ಥಿಗಳು ಪ್ರಕರಣ ದಾಖಲಿಸಿದ್ದು (ಆಯ್ಕೆ ಪಟ್ಟಿಯಿಂದ Delete ಆಗಿರುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ) ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ಮಧ್ಯಂತರ ಆದೇಶದಲ್ಲಿ ತಡೆಯಾಜ್ಞೆ ನೀಡಿರುತ್ತದೆ.

ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಈ ಮೇಲ್ಕಂಡಂತೆ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುವುದರಿಂದ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡಲು ತಡೆಯಾಜ್ಞೆ ಇರುವುದರಿಂದ ಪ್ರಸ್ತುತ ನೇಮಕಾತಿ ಆದೇಶ ನೀಡಲು ಸಾಧ್ಯವಾಗುತ್ತಿರುವುದಿಲ್ಲ.

**ಸಂಖ್ಯೆ: ಇಪಿ 35 ಪಿಎಂಎ 2023.**

(ಎಸ್. ಮಧು ಬಂಗಾರಪ್ಪ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು